ಅವಕಾಶವಿರುವುದಿಲ್ಲ. ಹಾಗೆ ಮಾಡಿದಲ್ಲಿ ಅರ್ಹತೆ ಇರುವ ಅಭ್ಯರ್ಥಿಗಳು ಅವಕಾಶ ವಂಚಿತರಾಗುತ್ತಾರೆ. ಅವರಿಗೆ ಸಮಾನ ಅವಕಾಶ ನೀಡಿದಂತಾಗುವುದಿಲ್ಲ.

ಈ) ಸಾಮಾನ್ಯ ನೇಮಕಾತಿ ನಿಯಮಗಳಲ್ಲಿ ಅವಕಾಶ ಕಲ್ಪಿಸಿರುವಂತೆ ನೇಮಕಾತಿಯಲ್ಲಿ ಶೇ. 5ರಷ್ಟು ಕೃಪಾಂಕ ನೀಡಿ ಗ್ರಾಮೀಣ ಅಭ್ಯರ್ಥಿಗಳ ನೇಮಕಾತಿ ಮಾಡುವುದನ್ನು ಮುಂದುವರಿಸಲಾಗಿದೆ.

1995-96ರಲ್ಲಿ ಪ್ರಾರಂಭಿಸಲಿರುವ ಹೊಸ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳು

345 - ಶ್ರೀ ಯು.ಬಿ. ಬಣಕಾರ್ (ಹಿರೇಕೆರೂರ್) : ಮಾನ್ಯ ಉನ್ನತಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) 1995-96ನೇ ಸಾಲಿನಲ್ಲಿ ಸರ್ಕಾರದವರು ಎಷ್ಟು ಸರ್ಕಾರಿ ಪ್ರಥಮದರ್ಜೆ ಕಾಲೇಜುಗಳನ್ನು ಪ್ರಾರಂಭಿಸಲು ಉದ್ದೇಶಿಸಿರುವುದು?

ಶ್ರೀ ಡಿ. ಮಂಜುನಾಥ (ಉನ್ನತ ಶಿಕ್ಷಣ ಸಚಿವರು) :

ಅ) 1995-96ನೇ ಶೈಕ್ಷಣಿಕ ವರ್ಷದಲ್ಲಿ ಕೇವಲ ಐನಾಪುರದಲ್ಲಿ ಮಾತ್ರ ಸರ್ಕಾರಿ ಕಾಲೇಜನ್ನು ಸ್ಥಾಪಿಸಲಾಗಿದೆ.

ಮಾಗಡಿ ಮತ್ತು ಕುದೂರಿನಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಪ್ರಾರಂಭ

346 - ಶ್ರೀ ಹೆಚ್.ಸಿ. ಬಾಲಕೃಷ್ಣ (ಮಾಗಡಿ) : ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮಾಗಡಿ ಮತ್ತು ಕುದೂರಿನಲ್ಲಿ ಪ್ರಥಮ ದರ್ಜೆ ಕಾಲೇಜಿಗೆ ಕೊಠಡಿ ಇಲ್ಲದೆ ಇರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಈ ವಿಷಯದಲ್ಲಿ ಸರ್ಕಾರದವರು ಕೈಗೊಂಡ ಕ್ರಮಗಳೇನು?

ಶ್ರೀ ಡಿ. ಮಂಜುನಾಥ (ಉನ್ನತ ಶಿಕ್ಷಣ ಸಚಿವರು) :

ಅ) ಇಲ್ಲ.

ಆ) ಮಾಗಡಿ ಮತ್ತು ಕುದೂರು ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳನ್ನು ಬಾಡಿಗೆ ಕಟ್ಟಡದಲ್ಲಿ ನಡೆಸಲಾಗುತ್ತಿದೆ. ಸದರಿ ಕಾಲೇಜುಗಳ ಕಟ್ಟಡಕ್ಕೆ ಅವಶ್ಯವಾದ ನಿವೇಶನ ಪಡೆದಿದ್ದು, 1996-97ನೇ ಸಾಲಿನಲ್ಲಿ ಕಟ್ಟಡಕ್ಕೆ ಬೇಕಾದ ಹಣವನ್ನು ಒದಗಿಸಿಕೊಳ್ಳಲು ಪರಿಶೀಲಿಸಲಾಗುತ್ತಿದೆ.

ರಾಜ್ಯದಲ್ಲಿರುವ ಸರ್ಕಾರಿ ಆಸ್ಪತ್ರೆಗಳಿಗೆ ಔಷಧಿ ವಿತರಣೆ.

347 - ಶ್ರೀ ಹೆಚ್.ಸಿ. ಬಾಲಕೃಷ್ಣ(ಮಾಗಡಿ) : ಮಾನ್ಯ ವಾರ್ತಾ ಮತ್ತು ಪ್ರಚಾರ ಹಾಗೂ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?